# ಅಬುಧಾಬಿ ರಾಜಕುಮಾರ ಗೌರವಾನ್ವಿತ ಶೇಖ್ ಖಾಲೆದ್ ಬಿನ್ ಮೊಹಮ್ಮದ್ ಬಿನ್ ಝಯೀದ್ ಅಲ್ ನಹ್ಯಾನ್ ಅವರ ಭಾರತ ಭೇಟಿ (ಸೆಪ್ಟೆಂಬರ್ 9-10, 2024)

ಸೆಪ್ಟೆಂಬರ್ 09, 2024

ಅಬುಧಾಬಿಯ ರಾಜಕುಮಾರ, ಘನತೆವೆತ್ತ ಶೇಖ್ ಖಾಲೆದ್ ಬಿನ್ ಮೊಹಮ್ಮದ್ ಬಿನ್ ಝಯೀದ್ ಅಲ್ ನಹ್ಯಾನ್ ಅವರು ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರ ಆಹ್ವಾನದ ಮೇರೆಗೆ 2024ರ ಸೆಪ್ಟೆಂಬರ್ 9-10ರವರೆಗೆ ಭಾರತಕ್ಕೆ ಅಧಿಕೃತ ಭೇಟಿ ನೀಡಿದರು. ಭಾರತಕ್ಕೆ ಅಬುಧಾಬಿ ಯುವರಾಜನ ಮೊದಲ ಅಧಿಕೃತ ಭೇಟಿ ಇದಾಗಿದೆ. ನಿನ್ನೆ ನವದೆಹಲಿಗೆ ಆಗಮಿಸಿದ ಅವರನ್ನು ವಾಣಿಜ್ಯ ಮತ್ತು ಕೈಗಾರಿಕಾ ಸಚಿವರಾದ ಶ್ರೀ ಪಿಯೂಷ್ ಗೋಯಲ್ ಅವರು ಸ್ವಾಗತಿಸಿದರು ಮತ್ತು ಅವರಿಗೆ ಔಪಚಾರಿಕ ಗೌರವ ವಂದನೆ ನೀಡಲಾಯಿತು. ಅವರೊಂದಿಗೆ ಸಚಿವರು, ಹಿರಿಯ ಅಧಿಕಾರಿಗಳು ಮತ್ತು ಉದ್ಯಮಿಗಳ ದೊಡ್ಡ ನಿಯೋಗವೂ ಭಾರತಕ್ಕೆ ಭೇಟಿ ನೀಡಿತು.

2. ರಾಜಕುಮಾರ ಇಂದು ಪ್ರಧಾನಮಂತ್ರಿಯವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಯುಎಇ ಅಧ್ಯಕ್ಷರಾದ ಘನತೆವೆತ್ತ ಶೇಖ್ ಮೊಹಮ್ಮದ್ ಬಿನ್ ಝಯೀದ್ ಅಲ್ ನಹ್ಯಾನ್ ಅವರಿಗೆ ಪ್ರಧಾನಮಂತ್ರಿಯವರು ತಮ್ಮ ಹಾರ್ದಿಕ ಶುಭಾಶಯಗಳನ್ನು ತಿಳಿಸಿದರು. ಇತ್ತೀಚಿನ ವರ್ಷಗಳಲ್ಲಿ ಭಾರತ-ಯುಎಇ ಸಮಗ್ರ ವ್ಯೂಹಾತ್ಮಕ ಪಾಲುದಾರಿಕೆಯಲ್ಲಿ ಸಾಧಿಸಿರುವ ಗಣನೀಯ ಪ್ರಗತಿಯ ಬಗ್ಗೆ ಉಭಯ ನಾಯಕರು ಸಂತೃಪ್ತಿ ವ್ಯಕ್ತಪಡಿಸಿದರು. ಅಲ್ಲದೆ, ದ್ವಿಪಕ್ಷೀಯ ಸಹಕಾರದ ಎಲ್ಲಾ ಕ್ಷೇತ್ರಗಳಲ್ಲಿ ಪಾಲುದಾರಿಕೆಯನ್ನು ಮತ್ತಷ್ಟು ವಿಸ್ತರಿಸುವ ಮತ್ತು ಆಳಗೊಳಿಸುವ ಅವಕಾಶಗಳ ಬಗ್ಗೆ ಚರ್ಚಿಸಿದರು. ಸಮಗ್ರ ಆರ್ಥಿಕ ಪಾಲುದಾರಿಕೆ ಒಪ್ಪಂದದ (ಸಿಇಪಿಎ) ಯಶಸ್ಸು ಮತ್ತು ಇತ್ತೀಚೆಗೆ ಜಾರಿಗೆ ಬಂದಿರುವ ದ್ವಿಪಕ್ಷೀಯ ಹೂಡಿಕೆ ಒಪ್ಪಂದ (ಬಿಐಟಿ)ವು ಉಭಯ ದೇಶಗಳ ನಡುವಿನ ಬಲವಾದ ಆರ್ಥಿಕ ಮತ್ತು ವಾಣಿಜ್ಯ ಪಾಲುದಾರಿಕೆಗೆ ಮತ್ತಷ್ಟು ಉತ್ತೇಜನ ನೀಡಲಿದೆ ಎಂದು ಅವರು ಒಪ್ಪಿಕೊಂಡರು. ವಿಶೇಷವಾಗಿ ಪರಮಾಣು ಶಕ್ತಿ, ನಿರ್ಣಾಯಕ ಖನಿಜಗಳು, ಹಸಿರು ಜಲಜನಕ, ಕೃತಕ ಬುದ್ಧಿಮತ್ತೆ ಮತ್ತು ಅತ್ಯಾಧುನಿಕ ತಂತ್ರಜ್ಞಾನಗಳಲ್ಲಿನ ಹೊಸ ಅಂಶಗಳನ್ನು ಅನ್ವೇಷಿಸುವ ಅಗತ್ಯವನ್ನು ಅವರು ಒತ್ತಿಹೇಳಿದರು.

3. ಈ ಭೇಟಿಯ ವೇಳೆ ಈ ಕೆಳಗಿನ ಎಂಒಯುಗಳು/ಒಪ್ಪಂದಗಳಿಗೆ ಸಹಿ ಹಾಕಲಾಯಿತು. ಇವುಗಳು ಸಾಂಪ್ರದಾಯಿಕ ಮತ್ತು ಸಹಕಾರದ ಹೊಸ ಕ್ಷೇತ್ರಗಳಲ್ಲಿ ಸಹಭಾಗಿತ್ವವನ್ನು ವೃದ್ಧಿಸಲು ವೇದಿಕೆ ಕಲ್ಪಿಸಿತು-

· ನ್ಯೂಕ್ಲಿಯರ್ ಪವರ್ ಕಾರ್ಪೊರೇಷನ್ ಆಫ್ ಇಂಡಿಯಾ ಲಿಮಿಟೆಡ್ (ಎನ್‌ಎನ್‌ಪಿಸಿಐಎಲ್) ಮತ್ತು ಎಮಿರೇಟ್ಸ್ ನ್ಯೂಕ್ಲಿಯರ್ ಎನರ್ಜಿ ಕಾರ್ಪೊರೇಷನ್ (ಇಎನ್‌ಇಸಿ) ನಡುವೆ ಪರಮಾಣು ಸಹಕಾರಕ್ಕೆ ಸಂಬಂಧಿಸಿದ ಒಪ್ಪಂದ

· ಅಬುಧಾಬಿ ನ್ಯಾಷನಲ್ ಆಯಿಲ್ ಕಂಪನಿ (ಎಡಿಎನ್ ಒಸಿ) ಮತ್ತು ಇಂಡಿಯನ್ ಆಯಿಲ್ ಕಾರ್ಪೊರೇಷನ್ ಲಿಮಿಟೆಡ್ ನಡುವೆ ದೀರ್ಘಾವಧಿಯ ಎಲ್‌ಎನ್‌ಜಿ ಪೂರೈಕೆ ಒಪ್ಪಂದ

· ಎಡಿಎನ್‌ಒಸಿ ಮತ್ತು ಇಂಡಿಯಾ ಸ್ಟ್ರ್ಯಾಟೆಜಿಕ್ ಪೆಟ್ರೋಲಿಯಂ ರಿಸರ್ವ್ ಲಿಮಿಟೆಡ್ (ಐಎಸ್‌ಪಿಆರ್‌ಎಲ್) ನಡುವೆ ಒಪ್ಪಂದ

· ಉರ್ಜಾ ಭಾರತ್ ಮತ್ತು ಎಡಿಎನ್‌ಒಸಿ ನಡುವೆ ಅಬುಧಾಬಿ ಆನ್ ಶೋರ್ ಬ್ಲಾಕ್ 1 ಗಾಗಿ ಉತ್ಪಾದನಾ ರಿಯಾಯಿತಿ ಒಪ್ಪಂದ.

· ಭಾರತದಲ್ಲಿ ಆಹಾರ ಪಾರ್ಕ್ ಅಭಿವೃದ್ಧಿಗಾಗಿ ಗುಜರಾತ್ ಸರ್ಕಾರ ಮತ್ತು ಅಬುಧಾಬಿ ಡೆವಲಪ್‌ಮೆಂಟಲ್ ಹೋಲ್ಡಿಂಗ್ ಕಂಪನಿ ಪಿಜೆಎಸ್‌ಸಿ (ಎಡಿಕ್ಯೂ) ನಡುವೆ ಒಪ್ಪಂದ.

4. ಪರಮಾಣು ಸಹಕಾರ ಕುರಿತ ಒಪ್ಪಂದವು ಪರಮಾಣು ವಿದ್ಯುತ್ ಸ್ಥಾವರಗಳ ಕಾರ್ಯಾಚರಣೆ ಮತ್ತು ನಿರ್ವಹಣೆ, ಭಾರತದಿಂದ ಪರಮಾಣು ಸರಕು ಮತ್ತು ಸೇವೆಗಳ ಪೂರೈಕೆ, ಪರಸ್ಪರ ಹೂಡಿಕೆ ಅವಕಾಶಗಳ ಅನ್ವೇಷಣೆ ಮತ್ತು ಸಾಮರ್ಥ್ಯ ನಿರ್ಮಾಣದಲ್ಲಿ ಸಹಕಾರವನ್ನು ಹೆಚ್ಚಿಸುವ ನಿರೀಕ್ಷೆಯಿದೆ.

5. ದೀರ್ಘಕಾಲೀನ ಎಲ್‌ಎನ್‌ಜಿ ಸರಬರಾಜು ಒಪ್ಪಂದವು ವರ್ಷಕ್ಕೆ 1 ದಶಲಕ್ಷ ಮೆಟ್ರಿಕ್ ಟನ್ (ಎಂಎಂಟಿಪಿಎ) ಆಗಿದೆ. ಇದು ಕೇವಲ ಒಂದು ವರ್ಷದಲ್ಲಿ ಸಹಿ ಹಾಕಿದ ಇಂಥ ಮೂರನೇ ಒಪ್ಪಂದವಾಗಿದೆ. ಐಒಸಿಎಲ್ ಮತ್ತು ಗೇಲ್ ಎರಡೂ ಈ ಹಿಂದೆ ಎಡಿಎನ್‌ಒಸಿಯೊಂದಿಗೆ ಕ್ರಮವಾಗಿ 1.2 ಎಂಎಂಟಿಪಿಎ ಮತ್ತು 0.5 ಎಂಎಂಟಿಪಿಎಗಾಗಿ ದೀರ್ಘಕಾಲೀನ ಒಪ್ಪಂದಗಳಿಗೆ ಸಹಿ ಹಾಕಿವೆ. ಈ ಒಪ್ಪಂದಗಳು ಎಲ್‌ಎನ್‌ಜಿ ಮೂಲಗಳನ್ನು ವೈವಿಧ್ಯಗೊಳಿಸುವ ಮೂಲಕ ಭಾರತದಲ್ಲಿ ಇಂಧನ ಭದ್ರತೆಯನ್ನು ಬಲಪಡಿಸಿವೆ.

6. ಎಡಿಎನ್‌ಒಸಿ ಮತ್ತು ಐಎಸ್‌ಪಿಆರ್‌ಎಲ್ ನಡುವಿನ ಒಪ್ಪಂದವು, ಭಾರತದಲ್ಲಿ ಕಚ್ಚಾ ತೈಲ ಸಂಗ್ರಹಣೆಯ ಹೆಚ್ಚುವರಿ ಅವಕಾಶಗಳಲ್ಲಿ ಎಡಿಎನ್‌ಒಸಿಯ ಭಾಗವಹಿಸುವಿಕೆಗೆ ಅವಕಾಶ ಕಲ್ಪಿಸಲು ಮತ್ತು ಪರಸ್ಪರ ಸ್ವೀಕಾರಾರ್ಹ ನಿಯಮಗಳು ಮತ್ತು ಷರತ್ತುಗಳ ಮೇಲೆ ಅವುಗಳ ಸಂಗ್ರಹಣೆ ಮತ್ತು ನಿರ್ವಹಣಾ ಒಪ್ಪಂದವನ್ನು ನವೀಕರಿಸಲು ಅವಕಾಶ ನೀಡುತ್ತದೆ. ಈ ತಿಳಿವಳಿಕೆ ಒಪ್ಪಂದವು 2018ರಿಂದ ಐಎಸ್‌ಪಿಆರ್‌ಎಲ್‌ನ ಮಂಗಳೂರು ಭೂ ಸಂಗ್ರಹಾಗಾರದಲ್ಲಿ ಕಚ್ಚಾ ತೈಲ ಸಂಗ್ರಹಣೆಯಲ್ಲಿ ಎಡಿಎನ್‌ಒಸಿಯ ಪಾಲ್ಗೊಳ್ಳುವಿಕೆಯನ್ನು ಆಧರಿಸಿದೆ.

7. ಉರ್ಜಾ ಭಾರತ್ (ಐಒಸಿಎಲ್ ಮತ್ತು ಭಾರತ್ ಪೆಟ್ರೋ ರಿಸೋರ್ಸಸ್ ಲಿಮಿಟೆಡ್‌ನ ಜಂಟಿ ಯೋಜನೆ) ಮತ್ತು ಎಡಿಎನ್‌ಒಸಿ ನಡುವಿನ ಅಬುಧಾಬಿ ಆನ್ ಶೋರ್ ಬ್ಲಾಕ್ 1ರ ಉತ್ಪಾದನಾ ರಿಯಾಯಿತಿ ಒಪ್ಪಂದವು ಯುಎಇಯಲ್ಲಿ ಕಾರ್ಯನಿರ್ವಹಿಸುತ್ತಿರುವ ಯಾವುದೇ ಭಾರತೀಯ ಕಂಪನಿಗೆ ಮೊದಲನೆಯದಾಗಿದೆ. ಈ ರಿಯಾಯಿತಿಯು ಭಾರತಕ್ಕೆ ಕಚ್ಚಾ ತೈಲವನ್ನು ತರಲು ಉರ್ಜಾ ಭಾರತ್‌ಗೆ ಅವಕಾಶ ಕಲ್ಪಿಸುತ್ತದೆ. ಇದರಿಂದಾಗಿ ದೇಶದ ಇಂಧನ ಭದ್ರತೆಗೆ ಕೊಡುಗೆ ನೀಡಿದಂತಾಗುತ್ತದೆ.

8. ಫುಡ್ ಪಾರ್ಕ್‌ಗಳಿಗೆ ಸಂಬಂಧಿಸಿದ ಒಪ್ಪಂದವು, ಅಹಮದಾಬಾದ್‌ನ ಬಾವ್ಲಾದಲ್ಲಿರುವ ಗುಂಡನ್‌ಪಾರಾವನ್ನು ಈ ಮಹತ್ವಾಕಾಂಕ್ಷಿ ಯೋಜನೆಯ ಅತ್ಯಂತ ಭರವಸೆಯ ತಾಣವಾಗಿ ಅಭಿವೃದ್ಧಿಪಡಿಸುವ ಎಡಿಕ್ಯೂ ಆಸಕ್ತಿಯನ್ನು ತೋರಿಸುತ್ತದೆ. ಜತೆಗೆ 2025ರ ಎರಡನೇ ತ್ರೈಮಾಸಿಕದಲ್ಲಿ ಫುಡ್ ಪಾರ್ಕ್ ಯೋಜನೆಯನ್ನು ಪ್ರಾರಂಭಿಸುವ

ಉದ್ದೇಶವನ್ನೂ ಪ್ರದರ್ಶಿಸುತ್ತದೆ. ಎಡಿಕ್ಯೂ ಮತ್ತು ಎಡಿ ಬಂದರುಗಳಿಗೆ ಸ್ಥಳದ ಬಗ್ಗೆ ವಿವರವಾದ ಮಾಹಿತಿಯನ್ನು ಪಡೆಯಲು ಮತ್ತು ಅಗತ್ಯ ಅನುಮತಿಗಳನ್ನು ಪಡೆಯಲು ಗುಜರಾತ್ ಸರ್ಕಾರ ಸಹಾಯ ಮಾಡಲಿದೆ.

9. ಗೌರವಾನ್ವಿತ ಶೇಖ್ ಖಾಲೆದ್ ಬಿನ್ ಮೊಹಮ್ಮದ್ ಬಿನ್ ಝಯೇದ್ ಅಲ್ ನಹ್ಯಾನ್ ಅವರು ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ಶ್ರೀಮತಿ ದ್ರೌಪದಿ ಮುರ್ಮು ಅವರನ್ನು ಭೇಟಿಯಾದರು. ಉಭಯ ದೇಶಗಳ ನಡುವಿನ ಆತ್ಮೀಯ, ಐತಿಹಾಸಿಕ ಮತ್ತು ಸಮಗ್ರ ಸಂಬಂಧಗಳು ಹಾಗೂ ಇತ್ತೀಚಿನ ವರ್ಷಗಳಲ್ಲಿ ಕೈಗೊಳ್ಳಲಾದ ಹಲವಾರು ಉಪಕ್ರಮಗಳ ಬಗ್ಗೆಯೂ ಚರ್ಚೆಗಳು ನಡೆದವು. 3.5 ದಶಲಕ್ಷಕ್ಕೂ ಹೆಚ್ಚು ಭಾರತೀಯರಿಗೆ ಆತಿಥ್ಯ ನೀಡಿದ್ದಕ್ಕಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಯುಎಇ ನಾಯಕತ್ವಕ್ಕೆ ಕೃತಜ್ಞತೆ ಸಲ್ಲಿಸಿದರು.

10. ಅಬುಧಾಬಿ ರಾಜಕುಮಾರ ರಾಜ್‌ಘಾಟ್‌ಗೆ ಭೇಟಿ ನೀಡಿ ಮಹಾತ್ಮ ಗಾಂಧಿಗೆ ಗೌರವ ಸಲ್ಲಿಸಿದರು. ರಾಜ್‌ಘಾಟ್‌ನಲ್ಲಿ ಸಸಿ ನೆಟ್ಟ ಯುಎಇಯ ಮೂರನೇ ತಲೆಮಾರಿನ ನಾಯಕ ಎಂಬ ಹೆಗ್ಗಳಿಕೆಗೆ ಅವರು ಪಾತ್ರರಾದರು. ಈ ಹಿಂದೆ 1992ರಲ್ಲಿ ಯುಎಇಯ ಮಾಜಿ ಅಧ್ಯಕ್ಷ ಗೌರವಾನ್ವಿತ ಶೇಖ್ ಝಯೇದ್ ಬಿನ್ ಸುಲ್ತಾನ್ ಅಲ್ ನಹ್ಯಾನ್ ಹಾಗೂ 2016ರಲ್ಲಿ ಯುಎಇ ಅಧ್ಯಕ್ಷರಾಗಿದ್ದ ಗೌರವಾನ್ವಿತ ಶೇಖ್ ಮೊಹಮ್ಮದ್ ಬಿನ್ ಝಯೇದ್ ಅಲ್ ನಹ್ಯಾನ್ ಅವರು ರಾಜ್‌ಘಾಟ್‌ನಲ್ಲಿ ಸಸಿ ನೆಟ್ಟಿದ್ದರು. ಇದು ಒಂದು ವಿಶಿಷ್ಟ ಮತ್ತು ಅಪರೂಪದ ಸಂದರ್ಭವಾಗಿದ್ದು, ಉಭಯ ದೇಶಗಳ ನಡುವಿನ ಬಲವಾದ ಸಂಬಂಧದ ನಿರಂತರತೆಯು ಹಲವು ತಲೆಮಾರುಗಳಿಂದ ಮುಂದುವರಿದಿರುವುದನ್ನು ತೋರಿಸಿದೆ. ಒಂದೇ ದೇಶದ ಮೂರು ತಲೆಮಾರುಗಳ ನಾಯಕರು ಮಹಾತ್ಮರನ್ನು ಗೌರವಿಸಲು ಸಸಿಗಳನ್ನು ನೆಟ್ಟಿದ್ದು ರಾಜ್‌ಘಾಟ್ ಇತಿಹಾಸದಲ್ಲಿ ಇದೇ ಮೊದಲು.

11. ಗೌರವಾನ್ವಿತ ಶೇಖ್ ಖಾಲೆದ್ ಬಿನ್ ಮೊಹಮ್ಮದ್ ಬಿನ್ ಝಯೇದ್ ಅಲ್ ನಹ್ಯಾನ್ ಅವರು ನಾಳೆ ಮುಂಬೈಗೆ ಭೇಟಿ ನೀಡಲಿದ್ದು, ಭಾರತ-ಯುಎಇ ಉದ್ದಿಮೆ ಫೋರಂನಲ್ಲಿ ಭಾಗವಹಿಸಲಿದ್ದಾರೆ. ವಿವಿಧ ಕ್ಷೇತ್ರಗಳಲ್ಲಿ ದೇಶಗಳ ನಡುವೆ ಭವಿಷ್ಯದ ಸಹಕಾರದ ಬಗ್ಗೆ ಚಿಂತನ ಮಂಥನ ನಡೆಸಲು ಎರಡೂ ಕಡೆಯ ಉದ್ದಿಮೆ ಪ್ರಮುಖರು ಮತ್ತು ಅಧಿಕಾರಿಗಳಿಗೆ ಈ ಫೋರಂ ವೇದಿಕೆ ಒದಗಿಸುತ್ತದೆ. ಭಾರತ-ಯುಎಇ ವರ್ಚುವಲ್ ವ್ಯಾಪಾರ ಕಾರಿಡಾರ್ (ವಿಟಿಸಿ) ಮತ್ತು ವಿಟಿಸಿಗೆ ಅನುಕೂಲವಾಗುವಂಥ ಮೈತ್ರಿ ಇಂಟರ್‌ಫೇಸ್‌ನ ಕೆಲಸ ಪ್ರಾರಂಭಿಸಲು ನಾಳೆ ಮುಂಬೈನಲ್ಲಿ ಚಾಲನೆ ದೊರೆಯಲಿದೆ.

**ನವದೆಹಲಿ**

**ಸೆಪ್ಟೆಂಬರ್ 09, 2024**